**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು–560065**
*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 30.12.2022

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 31–12–2022 ರಿಂದ 04–01–2023 ವರೆಗೆ)

| ನಿಯತಾಂಕಗಳು | 31.12.2022 | 01.01.2023 | 02.01.2023 | 03.01.2023 | 04.01.2023 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 30 | 29 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 15 | 15 | 14 | 13 | 13 |
| ಮೋಡ ( ಪ್ರಮಾಣ) | 1 | 2 | 2 | 2 | 2 |
| ಅರ್ದ್ರತೆ 7.20 ಬೆ (ಶೇ) | 80 | 80 | 80 | 82 | 82 |
| ಅರ್ದ್ರತೆ 2.20 ಮ (ಶೇ) | 59 | 59 | 59 | 61 | 61 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3 | 3 | 4 | 4 | 4 |
| ಗಾಳಿಯ ದಿಕ್ಕು ( ಡಿಗ್ರಿ) | 79 | 79 | 108 | 108 | 90 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾದ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ 29.0–30.0$^{o}$ C ಮತ್ತು ಕನಿಷ್ಠ 13.0–15.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **80-83 %** ಇದ್ದು ಮಧ್ಯಾಹ್ನ **59-61 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3–4** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ | | • ಮುಂಗಾರು ಮತ್ತು ಕೆಲ ಹಿಂಗಾರು ಬೆಳೆಗಳನ್ನು ಕಟಾವು ಮಾಡಲು ಇದು ಸೂಕ್ತ ಕಾಲ.<br>• ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಧಾನ್ಯಗಳನ್ನು ಶೇಖರಿಸಿಡಿ.<br>• ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು.<br>• ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ರಾಗಿ | ಕಟಾವು | 1. ಕಟಾವಿಗೆ ಬಂದಿರುವ ರಾಗಿ ತೆನೆಗಳನ್ನು ಕಟಾವು ಮಾಡಲು ಇದು ಸೂಕ್ತ ಕಾಲ<br>2. ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಬಿಸಿಲಿನಲಿ ಒಣಗಿಸಿ ಧಾನ್ಯಗಳನ್ನು ಶೇಖರಿಸಿಡಿ. |
| ತೊಗರಿ | ಕಾಳು ಬಲಿಯುವ ಮತ್ತು ಕಟಾವು | 1. ಚೆನ್ನಾಗಿ ಬಲಿತಿರುವ ತೊಗರಿ ಕಾಳುಗಳನ್ನು ಕುಡುಗೋಲಿನಿಂದ ಕಟಾವು ಮಾಡಬಹುದು ಕಟಾವು ಮಾಡಿರುವ ಬೆಳೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಒಕ್ಕಣೆ ಮಾಡಿ ಗೋಣಿ ಚೀಲದಲ್ಲಿ ಶೇಖರಿಸಿ |
| ಮಾವು | ಹೂವಿನ ಕುಡಿ ಚಿಗುರುವ ಮತ್ತು ಹೂವಿನ ಹಂತ | 1. ಕನಿಷ್ಠ ಉಷ್ಣಾಂಶವು 3–4 $^{o}$C ಹಟಾತ್ ಕುಸಿತದಿಂದ ಮಾವಿನ ಹೂವಿನ ಮೇಲೆ ತುಂಬಾ ಪರಿಣಾಮ ಬಿದ್ದು ಹೂವುಗಳು ಉದುರುವುದು ಸರ್ವೇ ಸಾಮಾನ್ಯವಾಗಿದೆ. ಇದರ ಹತೋಟಿಗೆ ಪ್ಯಾಕ್ಲೋಬ್ಯುಟ್ರಜಾಲ್ ಅನ್ನು ಸಿಂಪಡಿಸಿ ಇದರಿಂದ ಎಲೆ ಚಿಗುರುವುದು ನಿಲ್ಲುತ್ತದೆ ಮತ್ತೆ ಹೊಸ ಹೂವುಗಳು ಬಿಡಲು ಪ್ರಾರಂಭವಾಗುತ್ತವೆ.<br>2. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಟ್ಟಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಫ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ)<br>3. ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>4. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝೂಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |

| | | |
|---|---|---|
| | | 5. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಛಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು.<br>6. ಅದರ ಜೊತೆಗೆ ಮರಗಳಲ್ಲಿ ಕಣ್ಣಾಡಿಸಿ ಪರಾವಲಂಬಿ ಸಸ್ಯಗಳಾದ ಬದನಿಕೆ (ಕಸ್ಕ್ಯುಟ, ಲೊರಾಂಥಸ್) ಮುಂತಾದುವುಗಳನ್ನು ಸವರಿತೆಗೆಯಬೇಕು.ಅಧಿಕ ಸಾಂದ್ರತೆ ನೆಡುವೆಕೆಯಲ್ಲಿಕಾಂಡ ಪರಾವಲಂಬಿ ಸಸ್ಯಗಳ ಹಾವಳಿ ಜಾಸ್ತಿಯಿರುತ್ತದೆ.<br>7. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಛಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು. |
| **ಪಶುಸಂಗೋಪನೆ** | | 1. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>2. ಪ್ರಾಣಿಗಳ ಶೆಡ್‌ಗಳಲ್ಲಿನ ನೆಲ ಹಾಸು/ಹುಲ್ಲನ್ನು ಪ್ರತಿದಿನ ಬದಲಾಯಿಸಬೇಕು.<br>3. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕಾ** | | 1. ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>2. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>3. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಫ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>4. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |
| **ರೇಷ್ಮೆ ಸಾಕಾಣಿಕೆ** | | 1. **ಸುಣ್ಣ ಕಟ್ಟು ರೋಗ:** ಈ ರೋಗವು ಸಾಮಾನ್ಯವಾಗಿ ಮಳೆಗಾಲ ಮತ್ತು ಚಳಿಗಾಲದಲ್ಲಿ ಕೆಲವು ಶಿಲೀಂಧ್ರಗಳ ಸೋಂಕಿನಿಂದ (ಬ್ಯುವೇರಿಯಾ ಬ್ಯಾಸಿಯಾನಾ) ಬರುತ್ತದೆ.<br>**2.** ರೋಗವನ್ನು ಯಶಸ್ವಿಯಾಗಿ ನಿಯಂತ್ರಿಸಬೇಕಾದರೆ ಉಷ್ಣಾಂಶ ಮತ್ತು ತೇವಾಂಶವನ್ನು ಶಿಫಾರಸ್ಸು ಮಾಡಿದ ರೀತಿಯಲ್ಲಿ ಕಾಪಾಡಬೇಕು.<br>**3.** ಜ್ವರಕ್ಕೆ ಕೂತಾಗ ಹಾಸಿಗೆಯನ್ನು ಲಘುವಾಗಿ ಹರಿದು ಸುಣ್ಣದ ಪುಡಿಯನ್ನು (5–6 ಗ್ರಾಂ/ಚದರ ಅಡಿಗೆ) ಧೂಳೀಕರಿಸುವುದನ್ನು ಮರೆಯಬಾರದು.<br>**4.** ರೇಷ್ಮೆ ಸಾಕಾಣಿಕಾ ಘಟಕದಲ್ಲಿ ಕನಿಷ್ಠ ಉಷ್ಣಾಂಶವು $22^0$ ಸೆ. ಗಿಂತ ಕಡಿಮೆಯಾದಲ್ಲಿ ರೂಮ್ ಹೀಟರ್‌ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುವ್ಯದು ಅವಶ್ಯಕ.<br>**5.** ಹಾಸಿಗೆಯನ್ನು ತೆಳುವಾಗಿಟ್ಟು ಹಳೆ ಹಾಸಿಗೆ ಒಣಗುವಂತೆ ಸುಣ್ಣವನ್ನು ಹಂತಕ್ಕೆ ತಕ್ಕಂತೆ ಸರಿ ಪ್ರಮಾಣದಲ್ಲಿ ಧೂಳೀಕರಿಸಿ ನೋಡಿಕೊಳ್ಳಬೇಕು.<br>**6.** ಬಲೆಯನ್ನು ಬಳಸಿ ಹಾಸಿಗೆಯನ್ನು ಸ್ವಚ್ಛಗೊಳಿಸಬೇಕು ಮತ್ತು ರೋಗಗ್ರಸ್ಥ ಹುಳುಗಳನ್ನು ಆಯ್ದು ಮಣ್ಣಿನಲ್ಲಿ ಹೂತು ಹಾಕಿ ನಾಶಪಡಿಸಬೇಕು. ಸಾಕಾಣಿಕೆ ಮನೆ ಮತ್ತು ಅದರ ಸುತ್ತಲೂ ಶೇ.5ರ ಬ್ಲೀಚಿಂಗ್ ಪುಡಿ ಮತ್ತು ಸುಣ್ಣದ ಮಿಶ್ರಣವನ್ನು (1:19) ಧೂಳೀಕರಿಸಬೇಕು ಹಾಗೂ ವೈಯಕ್ತಿಕ ಶುಭ್ರತೆಯನ್ನು ಕಾಪಾಡಬೇಕು.<br>7. ಕಾಲಕಾಲಕ್ಕೆ ಹಾಸಿಗೆ ಸೋಂಕು ನಿವಾರಕಗಳಾದ ಸುರಕ್ಷ, ವಿಜೇತ, ಅಂಕುಶ್, ಸಂರಕ್ಷಕ ಮುಂತಾದ ಔಷಧಿಗಳನ್ನು ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಧೂಳೀಕರಿಸುತ್ತಿರಬೇಕು ಮತ್ತು ರೋಗ ಕಾಣಿಸಿಕೊಂಡಾಗ ಹತೋಟಿ ಬರುವವರೆಗೂ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಸೋಂಕು ನಿವಾರಕಗಳನ್ನು ಬಳಸಬೇಕು. |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.